**Akashvani: Bangalore**
**Regional Bulletin In Kannada**
**28.08.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ರಾಜ್ಯದಲ್ಲಿ ಬರಪೀಡಿತ ಪ್ರದೇಶ ಪರಿಶೀಲನೆ ವೇಳೆ ಇನ್ನಷ್ಟು ತಾಲೂಕು ಸೇರ್ಪಡೆ ಸಾಧ್ಯತೆ - ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್
2. ವಿಬಿ ಜಿ ರಾಮ್-ಜಿ ಯೋಜನೆಯಡಿ ೧೫ ದಿನಗಳೊಳಗೆ ಕೂಲಿ ಹಣ ಪಾವತಿಸುವಂತೆ ಸಚಿವ ಈಶ್ವರ್ ಬಿ. ಖಂಡ್ರೆ ಸೂಚನೆ
3. ರೈಲ್ವೆ ಚತುಷ್ಪಥ ಯೋಜನೆಯಲ್ಲಿ ರಾಜ್ಯಕ್ಕೆ ತಾರತಮ್ಯ; ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ಸಚಿವ ಎಂ.ಬಿ. ಪಾಟೀಲ್ ನಿರ್ಧಾರ
4. ಕೆಪಿಎಸ್‌ಸಿ ಹಗರಣ; ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಅಸಮಾಧಾನ
5. ಮೈಸೂರಿಗೆ ಆಗಮಿಸಿದ ದಸರಾ ಮಹೋತ್ಸವದ ಮೊದಲ ಹಂತದ ಗಜಪಡೆ; ಸಚಿವರಿಂದ ಸ್ವಾಗತ

**********

ರಾಜ್ಯದ ೧೦೧ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಶೀಘ್ರವೇ ಕೇಂದ್ರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಕಂದಾಯ ಸಚಿವ ಹಾಗೂ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ೧೫ ದಿನಗಳಿಗೊಮ್ಮೆ ಬರಪರಿಶೀಲನೆ ನಡೆಸಲಾಗುವುದು, ಈ ವೇಳೆ ೪೦ ರಿಂದ ೫೦ ತಾಲೂಕುಗಳು ಬರಪೀಡಿತ ವರ್ಗಕ್ಕೆ ಸೇರುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ. ಕೇಂದ್ರ ತಂಡ ರಾಜ್ಯಕ್ಕೆ ಆಗಮಿಸಿ, ಬರ ಸಮೀಕ್ಷೆ ನಡೆಸಿದ ಬಳಿಕ, ಬರ ಪರಿಹಾರ ಬಿಡುಗಡೆಯಾಗಲಿದೆ ಎಂದು ಮಾಹಿತಿ ನೀಡಿದ್ದಾರೆ. ರೈತರ ಸಾಲಮನ್ನಾ ಮಾಡುವ ಕುರಿತಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ, ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರ ಬಗ್ಗೆ ಪ್ರತಿಕ್ರಿಯಿಸಿದ ಅವರು, ಮಾಹಿತಿ ಪ್ರಕಾರ ನೇಪಾಳದಲ್ಲಿ ೧೨ ಮಂದಿ ಕನ್ನಡಿಗರಿದ್ದಾರೆ. ಇನ್ನು ಹೆಚ್ಚಿನ ಜನರು ಪ್ರವಾಹದಲ್ಲಿ ಸಿಲುಕಿರುವ ಮಾಹಿತಿ ಇದೆ. ಕಠ್ಮಂಡುವಿಗೆ ಶೀಘ್ರವೇ ಅಧಿಕಾರಿಗಳನ್ನು ಕಳುಹಿಸಲಾಗುವುದು ಎಂದು ತಿಳಿಸಿದ್ದಾರೆ.

**********

ರಾಜ್ಯದ ೧೦೧ ತಾಲೂಕಿನಲ್ಲಿ ಬರ ಪರಿಸ್ಥಿತಿ ಇದ್ದು, ಗ್ರಾಮೀಣ ಜನರ ಬೇಡಿಕೆಗೆ ಅನುಗುಣವಾಗಿ ವಿಬಿ-ಜಿ-ರಾಮ್ ಜಿ ಯೋಜನೆಯಡಿ ಉದ್ಯೋಗ ನೀಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ಸೂಚನೆ ನೀಡಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಇಂದು ಕೆಲವು ಜಿಲ್ಲೆಗಳ ವಿಬಿ-ಜಿ-ರಾಮ್ ಜಿ ಅನುಷ್ಠಾನದ ಪ್ರಗತಿ ಪರಿಶೀಲನೆ ನಡೆಸಿದ ಅವರು, ೧೫ ದಿನಗಳೊಳಗಾಗಿ ಕೂಲಿ ಹಣ ಪಾವತಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನರೇಗಾದಡಿ ನೀಡಿದ್ದ ಉದ್ಯೋಗಕ್ಕೆ ಹೋಲಿಸಿದರೆ ವಿಬಿ-ಜಿ-ರಾಮ್ ಜಿಯಲ್ಲಿ ಶೇಕಡ ಲ೦ರಷ್ಟು ಕಡಿಮೆಯಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗ್ರಾಮೀಣ ಕುಡಿಯುವ ನೀರು ಪೂರೈಕೆ ಯೋಜನೆಗೆ ಅರಣ್ಯ ಇಲಾಖೆ ಅನುಮತಿ ದೊರಕದೆ ಕಾಮಗಾರಿ ವಿಳಂಬವಾಗಿದೆ. ಶೀಘ್ರವೇ ಸಭೆ ನಡೆಸಿ, ಅನುಮತಿ ಪಡೆಯಲು ಕ್ರಮ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**********

ಕೇಂದ್ರ ಸರ್ಕಾರವು ದೇಶದಲ್ಲಿ ಸುಗಮ ರೈಲು ಸಂಚಾರ ಮತ್ತು ಸರಕು ಸಾಗಾಣೆ ಉದ್ದೇಶದಿಂದ ೭ ಮಾರ್ಗಗಳನ್ನು ಚತುಷ್ಪಥವಾಗಿ ಮೇಲ್ದರ್ಜೆಗೇರಿಸಿದೆ. ಆದರೆ ರಾಜ್ಯದ ಒಂದೇ ಒಂದು ರೈಲು ಮಾರ್ಗವನ್ನು ಪರಿಗಣಿಸದೇ ಕೇಂದ್ರ ಸರ್ಕಾರ ತಾರತಮ್ಯ ಮಾಡಿದೆ ಎಂದು ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಆರೋಪಿಸಿದ್ದಾರೆ. ಈ ಕುರಿತಂತೆ ಕೇಂದ್ರಕ್ಕೆ ಮುಖ್ಯಮಂತ್ರಿ ಅವರಿಂದ ಪತ್ರ ಬರೆಸುವ ಜೊತೆಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಖುದ್ದಾಗಿ ಭೇಟಿ ಮಾಡಿ, ಮನವಿ ಮಾಡಲಾಗುವುದು ಎಂದು

ತಿಳಿಸಿದ್ದಾರೆ. ರಾಜ್ಯದಲ್ಲಿ ಬೆಂಗಳೂರು-ಪುಣೆ, ಮುಂಬೈ, ಬೆಂಗಳೂರು-ಮಂಗಳೂರು, ಬೆಂಗಳೂರು-ವಿಜಯಪುರ, ಬೆಂಗಳೂರು-ಚೈನ್ನೈ ಸೇರಿದಂತೆ ಹಲವು ಅತಿ ದಟ್ಟಣೆಯ ಮಾರ್ಗಗಳಿದ್ದು, ಇವುಗಳನ್ನು ಚತುಷ್ಪಥ ಮಾರ್ಗಗಳನ್ನಾಗಿ ಅಭಿವೃದ್ಧಿಪಡಿಸಬೇಕು ಎಂದು ಹೇಳಿದ್ದಾರೆ. ಕೇಂದ್ರದ ತಾರತಮ್ಯದ ಬಗ್ಗೆ ರಾಜ್ಯದ ಸಂಸದರು ಧ್ವನಿ ಎತ್ತಬೇಕು ಎಂದು ಒತ್ತಾಯಿಸಿದ್ದಾರೆ.

**********

ಗೃಹ ಸಚಿವ ಪ್ರಿಯಾಂಕ್ ಖರ್ಗೆ ಈ ಹಿಂದೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವರಾಗಿದ್ದಾಗ ಅವರ ಇಲಾಖೆಯಲ್ಲಿ ಅವ್ಯವಹಾರ ನಡೆದಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪ ಮಾಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ತರಾತುರಿಯಲ್ಲಿ ಎಇಇಗಳ ನೇಮಕಾತಿ ಸಂಬಂಧ ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಈ ಕುರಿತಂತೆ ಕುಮಾರಸ್ವಾಮಿ ಅವರು, ಒಎಂಆರ್ ಶೀಟ್ ಮತ್ತು ದಾಖಲೆಗಳನ್ನು ಬಿಡುಗಡೆ ಮಾಡಿದ್ದಾರೆ. ಕೆಪಿಎಸ್‌ಸಿ ಹಗರಣ ಸಂಬಂಧ ಪರೀಕ್ಷಾ ನಿರ್ವಾಹಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರ ತಂದೆ ಆರೋಗ್ಯ ಸರಿ ಇಲ್ಲ ಎಂದು ಈ ಹಿಂದೆ ಪ್ರಿಯಾಂಕ್ ಖರ್ಗೆ ತಿಳಿಸಿದ್ದರು. ಈಗ ಜ್ಞಾನೇಂದ್ರ ಎಲ್ಲಿದ್ದಾರೆ ಎಂದು ಗೊತ್ತಿಲ್ಲ ಎಂದಿರುವ ಅವರಿಗೆ ಗೃಹ ಇಲಾಖೆ ಯಾಕೆ ಎಂದು ಪ್ರಶ್ನಿಸಿದ್ದಾರೆ.

**********

ಐಎಎಸ್ ಅಧಿಕಾರಿ ಜ್ಞಾನೇಂದ್ರ ಎಲ್ಲಿದ್ದಾರೆ ಎಂದು ತಮಗೆ ತಿಳಿದಿದ್ದು, ಅದನ್ನು ಬಿಜೆಪಿ ಅಥವಾ ಜೆಡಿಎಸ್‌ಗೆ ಬಹಿರಂಗಪಡಿಸುವ ಅಗತ್ಯವಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಧಿಕಾರಿ ರಜೆ ಕೋರಿ ಲಿಖಿತ ವಿನಂತಿ ಸಲ್ಲಿಸಿರುವುದಾಗಿ ಮಾಹಿತಿ ನೀಡಿದ್ದಾರೆ. ಇದೇ ವೇಳೆ ರಾಜ್ಯಕ್ಕೆ ಕುಮಾರಸ್ವಾಮಿ ಅವರಿಂದ ಕೇಂದ್ರದ ಕೊಡುಗೆ ಏನು ಎಂದು ಪ್ರಶ್ನಿಸಿದ್ದಾರೆ.

**********

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಮೊದಲ ಹಂತದ ಗಜಪಡೆ ಇಂದು ಕಾಡಿನಿಂದ ನಾಡಿಗೆ ಆಗಮಿಸಿದ್ದು, ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಅರಮನೆಯ ಜಯಮಾರ್ತಾಂಡ ದ್ವಾರದ ಬಳಿ ಆಗಮಿಸಿದ ಒಂಬತ್ತು ಆನೆಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹಾಗೂ ಅರಣ್ಯ ಸಚಿವ ರಾಮಲಿಂಗರೆಡ್ಡಿ ಸ್ವಾಗತಿಸಿದರು. ಮೊದಲ ಹಂತದಲ್ಲಿ ಧನಂಜಯ, ಮಹೇಂದ್ರ, ಏಕಲವ್ಯ, ಪ್ರಶಾಂತ, ಗೋಪಿ, ಶ್ರೀರಾಮ, ಸುಗ್ರೀವ, ಲಕ್ಷ್ಮಿ ಹಾಗೂ ಕಾವೇರಿ ಸೇರಿದಂತೆ ಒಟ್ಟು ಒಂಬತ್ತು ಆನೆಗಳು ಮೈಸೂರಿಗೆ ಆಗಮಿಸಿವೆ. ಈ ವೇಳೆಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, "ಈ ಬಾರಿಯ ದಸರಾ ಮಹೋತ್ಸವವನ್ನು ಯಾವುದೇ ವಿಘ್ನಗಳಿಲ್ಲದೆ ಸಾಂಪ್ರದಾಯಿಕ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಸಚಿವ ರಾಮಲಿಂಗ ರೆಡ್ಡಿ ಮಾತನಾಡಿ, ಜಂಬೂಸವಾರಿಯಲ್ಲಿ ವಿಶ್ವವಿಖ್ಯಾತ ಚಿನ್ನದ ಅಂಬಾರಿ ಹೊರಲಿರುವ ಆನೆಯನ್ನು ತರಬೇತಿ ಮತ್ತು ತಾಲೀಮು ಪೂರ್ಣಗೊಂಡ ಬಳಿಕ ಅಂತಿಮಗೊಳಿಸಲಾಗುವುದು. ಆನೆಗಳ ದೈಹಿಕ ಸಾಮರ್ಥ್ಯ ಹಾಗೂ ಚಲನವಲನಗಳ ಸಂಪೂರ್ಣ ಮಾಹಿತಿ ಅರಣ್ಯ ಇಲಾಖೆ ಅಧಿಕಾರಿಗಳ ಬಳಿ ಇರಲಿದ್ದು, ತರಬೇತಿಯ ಕೊನೆಯಲ್ಲಿ ಸೂಕ್ತ ಆನೆಯನ್ನು ಆಯ್ಕೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು.

**********

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿಂದು ಸೈನ್ಸ್ ಇನ್ ಆಕ್ಷನ್ ಎಂಬ ವೈಜ್ಞಾನಿಕ ಪ್ರಾತ್ಯಕ್ಷಿಕೆಯನ್ನು ಜವಾಹರಲಾಲ್ ನೆಹರು ಆಧುನಿಕ ವಿಜ್ಞಾನ ಸಂಶೋಧನಾ ಕೇಂದ್ರದ ಪ್ರೊಫೆಸರ್ ಎಂ.ಎಸ್. ವಿದ್ಯಾಧಿರಾಜ ಚಾಲನೆ ನೀಡಿದರು. ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ಈ ವಿಜ್ಞಾನ ಪ್ರದರ್ಶನದಲ್ಲಿ ಬೆಂಗಳೂರಿನ ೧೩ ಶಾಲೆಗಳ ವಿದ್ಯಾರ್ಥಿಗಳು ಪ್ರಯೋಗಗಳನ್ನು ಪ್ರದರ್ಶಿಸಿದ್ದಾರೆ. ಈ ವೇಳೆ ಮಾತನಾಡಿದ ಬೆಂಗಳೂರು ನೆಹರು ತಾರಾಲಯದ ನಿರ್ದೇಶಕ ಡಾ. ಬಿ.ಆರ್. ಗುರುಪ್ರಸಾದ್, ಈ ವಸ್ತು ಪ್ರದರ್ಶನದಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಭಾಗವಹಿಸಿ, ದೇಶವನ್ನು ವಿಜ್ಞಾನ ಕ್ಷೇತ್ರದಲ್ಲಿ ಮತ್ತಷ್ಟು ಉತ್ತುಂಗಕ್ಕೆ ಒಯ್ಯಬೇಕು ಎಂದು ಕರೆ ನೀಡಿದ್ದಾರೆ.

ಇದೇ ವೇಳೆ ಮಾತನಾಡಿದ ಪ್ರೊಫೆಸರ್ ವಿದ್ಯಾಧಿರಾಜ, ಮಕ್ಕಳ ವಿಜ್ಞಾನ ಪ್ರದರ್ಶನ ಉಪಯುಕ್ತವಾಗಿದೆ ಎಂದರು.

**********

ಬೆಳಗಾವಿಯ ಮರಾಠಾ ಲೈಟ್ ಇನ್‌ಫೆಂಟ್ರಿ ರೆಜಿಮೆಂಟಲ್ ಸೆಂಟರ್ -ಮರಾಠಾ ಲಘು ಪದಾತಿದಳ ಕೇಂದ್ರದಲ್ಲಿ ಇಂದು ರಕ್ಷಾ ಬಂಧನವನ್ನು ಆಚರಿಸಲಾಯಿತು. ಸಶಸ್ತ್ರ ಪಡೆಯ ಯೋಧರು ದೇಶದ ಭದ್ರತೆ ಸಲ್ಲಿಸುವ ಅನುಪಮ ಸೇವೆಯನ್ನು ಮನ್ನಿಸಿ ಹಾಗೂ ಸೈನಿಕರ  ಮಧ್ಯದ ಪರಸ್ಪರ ನಂಬಿಕೆ, ವಾತ್ಸಲ್ಯ ಮತ್ತು ಗೌರವದ ಶಾಶ್ವತ ಬಂಧನಕ್ಕೆ ಸಮಾರಂಭ ಸಾಕ್ಷಿಯಾಯಿತು. ಸಹೋದರ ಸಹೋದರಿಯರ ನಡುವಣ ಪವಿತ್ರ ಬಾಂಧವ್ಯದ ಸಂಭ್ರಮಾಚರಣೆಯ ರಕ್ಷಾ ಬಂಧನವನ್ನು ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಭ್ರಮದಿಂದ ಆಚರಿಸಲಾಗುತ್ತಿದೆ.

**********

ಸ್ಥಳೀಯ ಯುವಕರಲ್ಲಿ ತಾಂತ್ರಿಕ ಕೌಶಲ್ಯ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಉದ್ದೇಶದಿಂದ ಕಾರವಾರ ನೌಕಾ ಡಾಕ್‌ಯಾರ್ಡ್ ಹಾಗೂ ಸ್ಥಳೀಯ ಕೈಗಾರಿಕಾ ತರಬೇತಿ ಸಂಸ್ಥೆಗಳ ನಡುವೆ ಮಹತ್ವದ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಕಾರವಾರದ ನೌಕಾ ಡಾಕ್‌ಯಾರ್ಡ್ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾರವಾರದ ಸೋಮನಾಥ ಐಟಿಐ ಬಿಣಗಾ, ಸರ್ಕಾರಿ ಐಟಿಐ ಬಾಡ್, ಮಲ್ಲಿಕಾರ್ಜುನ ಐಟಿಐ ಸಿದ್ದರ ಹಾಗೂ ಸರ್ಕಾರಿ ಐಟಿಐ ಅಂಕೋಲಾ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಾಯಿತು. ಕರ್ನಾಟಕ ನೌಕಾ ಪ್ರದೇಶದ ನಾಗರಿಕ-ಸೇನಾ ಸಹಕಾರವನ್ನು ಬಲಪಡಿಸುವ ಭಾಗವಾಗಿ ಈ ಉಪಕ್ರಮ ಕೈಗೊಳ್ಳಲಾಗಿದೆ. ಒಪ್ಪಂದದಡಿ ಸ್ಥಳೀಯ ಐಟಿಐ ವಿದ್ಯಾರ್ಥಿಗಳಿಗೆ ನೌಕಾ ಡಾಕ್‌ಯಾರ್ಡ್‌ನ ಅತ್ಯಾಧುನಿಕ ನಿರ್ವಹಣೆ ಮತ್ತು ಸಹಾಯಕ ವ್ಯವಸ್ಥೆಗಳು, ಆಧುನಿಕ ತಂತ್ರಜ್ಞಾನಗಳು ಹಾಗೂ ಕೈಗಾರಿಕಾ ಕಾರ್ಯವಿಧಾನಗಳ ಕುರಿತು ನೇರ ಪರಿಚಯ ದೊರೆಯಲಿದೆ.

*****END*****